ತಿಪ್ಪಗೊಂಡನಹಳ್ಳಿ ಗ್ರಾಮದ ಡೀಮ್ಡ್ ಫಾರೆಸ್ಟ್

898 (1122); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ನೆಲಮಂಗಲ ವಿಧಾನ ಸಭಾ ಕ್ಷೇತ್ರ ವ್ಯಾಪ್ತಿಯ ತ್ಯಾಮಗೊಂಡ್ಲು ಹೋಬಳಿಯ ತಿಪ್ಪಗೊಂಡನಹಳ್ಳಿ ಗ್ರಾಮದ ಯಾವ ಯಾವ ಸರ್ವೆ ನಂಬರ್‌ನ ಎಷ್ಟು ವಿಸ್ತೀರ್ಣದ ಜಮೀನನ್ನು ಡೀಮ್ಡ್ ಫಾರೆಸ್ಟ್ ಎಂದು ಗುರುತಿಸಲಾಗಿದೆ;

ಆ) ಈ ಡೀಮ್ಡ್ ಫಾರೆಸ್ಟ್‌ನಲ್ಲಿ ಯಾರಾದರು ಅತಿಕ್ರಮಣವಾಗಿ ಪ್ರವೇಶಿಸಿ ಭೂ ಒತ್ತುವರಿ ಮಾಡಿಕೊಂಡಿರುವರೇ? (ಸಂಪೂರ್ಣ ಮಾಹಿತಿಯನ್ನು ನೀಡುವುದು)

ಶ್ರೀ ಬಿ. ರಮಾನಾಥ ರೈ (ಮಾನ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಸಚಿವರು)

ಅ) ತಜ್ಞರ ಸಮಿತಿಯು ನೀಡಿರುವ ವರದಿಯ ಪ್ರಕಾರ ಬೆಂಗಳೂರು ಗ್ರಾಮಾಂತರ ಜಿಲ್ಲೆ, ನೆಲಮಂಗಲ ತಾಲ್ಲೂಕು, ತ್ಯಾಮಗೊಂಡ್ಲು ಹೋಬಳಿ, ತಿಪ್ಪಗೊಂಡನಹಳ್ಳಿ ಗ್ರಾಮದ ಸರ್ವೆ ನಂಬರ್ ಗಳಲ್ಲಿ ಡೀಮ್ಡ್ ಫಾರೆಸ್ಟ್ ಇರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ತಿಪ್ಪಗೊಂಡನಹಳ್ಳಿ ಗೋಮಾಳದ ವಿವರ

899 (1123); ಡಾ॥ ಕೆ. ಶ್ರೀನಿವಾಸಮೂರ್ತಿ (ನೆಲಮಂಗಲ)

ಅ) ನೆಲಮಂಗಲ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ , ತ್ಯಾಮಗೊಂಡ್ಲು ಹೋಬಳಿಯ ತಿಪ್ಪಗೊಂಡನಹಳ್ಳಿ ಗ್ರಾಮದ ಸ.ನಂ. 23, 24, 25 ಮತ್ತು 26 ಸ್ವತ್ತುಗಳು ಸರ್ಕಾರಿ ಗೋಮಾಳವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;